ಪ್ರಜಾ ವಾಹಿನಿ
ಜನ ದನಿ

**Friday 16th June 2023, Page No.04**

**RVCE: Kannada Festival 2023**

ಪ್ರಜಾ ವಾಹಿನಿ
ಜನ ದನಿ

ಗ್ರಾಮ ಸದಸ್ಯರುಗಳು ಭಾಗವಹಿಸಿದ್ದರು.

# ಕನ್ನಡ ಭಾಷೆ ಬೆಳವಣಿಗೆಗೆ ಮಹನೀಯರ ಕೊಡುಗೆ ಅಪಾರ

● ಪ್ರಜಾವಾಹಿನಿ-ಯಶವಂತಪುರ

ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆ ಬೆಳವಣಿಗೆಗೆ ಹಲವಾರು ಮಹನೀಯರು ಕೊಡುಗೆ ನೀಡಿ ಹೋಗಿದ್ದಾರೆ, ಭಾಷೆಯನ್ನು ಉಳಿಸಿ ಬೆಳೆಸಲು ನಾಡಿನ ಪ್ರತಿಯೊಬ್ಬರು ದೃಢ ಸಂಕಲ್ಪ ಮಾಡಬೇಕಿದೆ ಎಂದು ಸಾಹಿತಿ ಹಿರೇಮಗಳೂರು ಕಣ್ಣನ್ ಕರೆ ನೀಡಿದರು.

ಬೆಂಗಳೂರು-ಮೈಸೂರು ಮುಖ್ಯರಸ್ತೆಯಲ್ಲಿರುವ ಆರ್.ವಿ. ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆವರಣದಲ್ಲಿ 8ನೇ ಮೈಲ್ ಟೆಕ್ನೋ ಕಲ್ಚರಲ್ ಫೆಸ್ಟ್ 2023 ಮತ್ತು ಕರ್ನಾಟಕ-2023 ಕನ್ನಡ ಹಬ್ಬಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಕಳೆದ 50 ವರ್ಷಗಳ ಹಿಂದೆ ಕನ್ನಡ ಸಂಘವನ್ನು ಆರಂಭಿಸಿ ಕನ್ನಡ ಪರ ಚಟುವಟಿಕೆ ನಡೆಸುವ ಮೂಲಕ ಕನ್ನಡ ಭಾಷಾ ಬೆಳವಣಿಗೆಗೆ ಕೊಡುಗೆ ನೀಡಿ ಸುವರ್ಣ ಮಹೋತ್ಸವ ಆಚರಿಸುತ್ತಿರುವ ಕನ್ನಡ ಸಂಘದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಂತ್ರಿಕ ವಿದ್ಯಾಲಯವಾದರೂ ಕನ್ನಡದ ಬಗ್ಗೆ ಇರುವ ಕಳಕಳಿ ವ್ಯಕ್ತಪಡಿಸಿ, ಕನ್ನಡ ಪರ ವಾತಾವರಣ ನಿರ್ಮಾಣ ಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು. ನಮ್ಮ ಪೂರ್ವಜರು ಕನ್ನಡ ಸಾಹಿತ್ಯದಲ್ಲಿ ಗಣಿತ, ವಿಜ್ಞಾನ, ಗಾದೆ, ಒಗಟುಗಳ ಮೂಲಕ ಜೀವನ ಮೌಲ್ಯಗಳನ್ನು ಸಾರಿ ಜ್ಞಾನದ ಭಂಡಾರವನ್ನು ಹೆಚ್ಚಿಸಿಕೊಂಡು ಸಾಹಿತ್ಯ,ಕಲೆ, ಸಂಸ್ಕೃತಿ ಪರಂಪರೆ ಮೂಲಕ ಕನ್ನಡ ಭಾಷೆಯನ್ನು ಶ್ರೀಮಂತ ಗೊಳಿಸಿದ್ದಾರೆ ಎಂದರು.

ರಾ ಷ್ಟ್ರೀ ೦ ು ಂ



ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ.ಎಂ.ಪಿ.ಶ್ಯಾಮ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ ಕಾಲೇಜಿನಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಕಲೆ, ಸಾಹಿತ್ಯ, ಸಂಸ್ಕೃತಿ ಉತ್ತಮ ವಿಚಾರಧಾರೆಗಳತ್ತ ಒಲವು ಮೂಡಿಸಿಕೊಳ್ಳುವ ವಾತಾವರಣ ನಿರ್ಮಾಣ ಮಾಡಲು ದೃಢ ಹೆಜ್ಜೆ ಇಟ್ಟು ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ವಿದ್ಯಾರ್ಥಿಗಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗೆ ಪ್ರೋತ್ಸಾಹ ನೀಡಿ ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರತಿಭೆಯನ್ನು ಅನಾವರಣಗೊಳಿಸಲು ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ ಎಂದು ತಿಳಿಸಿದರು. ಕನ್ನಡ ಸಂಘದ ಮೂಲಕ ನಿರಂತರ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಂಡು ಕನ್ನಡ ಭಾಷಾ ಬೆಳವಣಿಗೆಗೆ. ಕೊಡುಗೆ ನೀಡಲಾಗುತ್ತಿದೆ ಎಂದರು.

ಸಾಹಿತಿ ನಾಗಶ್ರೀ ತ್ಯಾಗರಾಜ್, ಪ್ರಾಂಶುಪಾಲ ಡಾ. ಕೆಎನ್ ಸುಬ್ರಹ್ಮಣ್ಯ, ಉಪ ಪ್ರಾಂಶುಪಾಲೆ ಡಾ. ಕೆ ಎಸ್ ಗೀತಾ, ಕಾಲೇಜ್ ಕನ್ನಡ ಸಂಘದ ಅಧ್ಯಕ್ಷ ಎಂ.ವಿ. ವಿಕ್ರಮ್, ರಾಜಲಕ್ಷ್ಮಿ, ಮತ್ತಿತರರು ಉಪಸ್ಥಿತರಿದ್ದರು.

ಹಿರೇಮಗಳೂರು ಕಣ್ಣನ್ ಹಾಗೂ ನಾಗಶ್ರೀ ತ್ಯಾಗರಾಜ್ರವರು ಗಾದೆ, ಹರಟೆ, ಹಾಸ್ಯದ ಮೂಲಕ ನೆರೆದಿದ್ದರವರನ್ನು ರಂಜಿಸಿದರು.